**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 92/2020**

**ಚಾ.ಸಾಃ 11, ಫ್ರಾ.ಸಾಃ 04**

| | |
|---|---|
| ಸಾಕ್ಷಿದಾರನ ಹೆಸರು | ಶಿವರಾಮ ದೇಸಾಯಿ |
| ತಂದೆಯ ಹೆಸರು | ಶಂಕರ ದೇಸಾಯಿ |
| ವಯಸ್ಸು | 54 ವರ್ಷಗಳು |
| ಉದ್ಯೋಗ | ಸಹಾಯಕ ಆರಕ್ಷಕ ಉಪ-ನಿರೀಕ್ಷಕರು, ಹೊನ್ನಾವರ ಪೋಲೀಸ್ ಠಾಣೆ |
| ವಾಸ್ತವ್ಯ | ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 30-08-2024 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಕಳೆದ 5 ವರ್ಷಗಳಿಂದ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪ-ನಿರೀಕ್ಷಕನಾಗಿ ಕೆಲಸ ಮಾಡುತ್ತಿದ್ದೇನೆ.

ದಿನಾಂಕ 22-07-2019 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 12-00 ಗಂಟೆಗೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.228/2019 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-6 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-7 ಎಂದು, ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

ನಂತರ ಕೇಸಿನ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-12 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ.ಎಮ್.ಭಂಡಾರಿಯವರಿಂದಃ**

ದೂರನ್ನು ಪಿರ್ಯಾದುದಾರರು ಬರೆದುಕೊಂಡು ತಂದಿದ್ದರು. ಪಿರ್ಯಾದಿ ಜೊತೆ ಯಾರಾದರೂ ಬಂದಿದ್ದರೋ ಇಲ್ಲವೋ ನೆನಪಿಲ್ಲ. ದೂರನ್ನು ತಡವಾಗಿ ದಾಖಲಿಸಲು ಕಾರಣವನ್ನು

ಪಿರ್ಯಾದುದಾರರು ಹೇಳಿದ್ದಾರೆ. ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**